**All India Radio: Bangalore**
**Regional Bulletin In Kannada**
**15.02.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**15.02.2025 / 2.30 p.m.**
**<><><><>**

ಮುಖ್ಯಾಂಶಗಳು

1. ರಾಜ್ಯದ ರೈಲ್ವೆ ಯೋಜನೆಗಳ ಬಗ್ಗೆ ಬೆಂಗಳೂರಿನಲ್ಲಿಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಪ್ರಗತಿ ಪರಿಶೀಲನೆ
2. ಕಾಡಾನೆ ಹಾವಳಿ ನಿಯಂತ್ರಣ ಮಾಡುವಲ್ಲಿ ಸರ್ಕಾರ ವಿಫಲ -ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಆರೋಪ
3. ಕಾಂಗ್ರೆಸ್ ಪಕ್ಷದ ರಾಜ್ಯಾಧ್ಯಕ್ಷ ಹುದ್ದೆ ನಿಭಾಯಿಸಲು ಸಿದ್ಧ ; ಸಹಕಾರ ಸಚಿವ ರಾಜಣ್ಣ ಸ್ಪಷ್ಟನೆ
4. ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಂಗನ ಕಾಯಿಲೆ ಪೀಡಿತರ ಸಂಖ್ಯೆಯಲ್ಲಿ ಏರಿಕೆ ; ಜಿಲ್ಲಾಡಳಿತದಿಂದ ಜನ ಜಾಗೃತಿ
5. ಮಂಡ್ಯ ಜಿಲ್ಲೆಯಲ್ಲಿ ಖಾಸಗಿ ಸಕ್ಕರೆ ಕಾರ್ಖಾನೆಗಳು ೧೪ ದಿನದೊಳಗೆ ರೈತರಿಗೆ ಕಬ್ಬಿನ ಹಣ ಪಾವತಿಸಬೇಕು ; ಜಿಲ್ಲಾಧಿಕಾರಿ ಸೂಚನೆ

<><><><>

ಕೇಂದ್ರ ರೈಲ್ವೆ, ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ಇಂದು ಬೆಂಗಳೂರು ವಲಯ ರೈಲ್ವೆ ವ್ಯವಸ್ಥಾಪಕ ಕಚೇರಿಯಲ್ಲಿ ರಾಜ್ಯದ ರೈಲ್ವೆ ಯೋಜನೆಗಳ ಕುರಿತು ಪ್ರಗತಿ ಪರಿಶೀಲನೆ ನಡೆಸಿದರು. ಈ ನಡುವೆ ಬಿಜೆಪಿ ರಾಜ್ಯಾಧ್ಯಕ್ಷ ಬಿ. ವೈ. ವಿಜಯೇಂದ್ರ ಅವರು, ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಿದರು. ಇಂದು ಅವರು ಬಿಜೆಪಿ ಕೇಂದ್ರ ಕಚೇರಿಯಲ್ಲಿ ಆಯೋಜಿಸಿರುವ ಸುದ್ದಿಗೋಷ್ಠಿಯಲ್ಲಿ ಪಾಲ್ಗೊಳ್ಳಲಿದ್ದಾರೆ. ಬಳಿಕ ನಗರದ ಖಾಸಗಿ ಹೋಟೆಲ್‌ನಲ್ಲಿ ಸಂಜೆ ನಡೆಯಲಿರುವ ಸಭೆಯಲ್ಲಿ ರೈಲ್ವೆ ಆಯವ್ಯಯದ ಕುರಿತು ಪರಿಣಿತರೊಂದಿಗೆ ಸಂವಾದ ನಡೆಸಲಿದ್ದಾರೆ.

<><><><>

ಬೆಂಗಳೂರಿನ ಮೆಟ್ರೋ ದರ ಏರಿಕೆ ಜನಸಾಮಾನ್ಯರ ಮೇಲೆ ಹೊರೆಯಾಗಿದೆ ಎಂದು ಕೇಂದ್ರದ ಉಕ್ಕು ಮತ್ತು ಭಾರಿ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಹಾಸನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿದಿನ ಐದು ಗ್ಯಾರಂಟಿ ಯೋಜನೆಗಳಿಗೆ ಹಣ ತುಂಬಿಸುವ ಪ್ರಯತ್ನದಲ್ಲಿ ಅಭಿವೃದ್ಧಿ ಮರೀಚಿಕೆಯಾಗಿದೆ ಎಂದು ಹೇಳಿದ್ದಾರೆ. ಕೆಪಿಎಸ್ಸಿಯಲ್ಲಿ ಹದಿನೈದು ಜನ ಸದಸ್ಯರನ್ನು ನೇಮಕ ಮಾಡಿಕೊಂಡ ಸರ್ಕಾರ ಈವರೆಗೆ ಒಂದು ಪರೀಕ್ಷೆಯು ನಡೆಸಿಲ್ಲ, ಉದ್ಯೋಗ ಸೃಷ್ಟಿಯಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**ಧ್ವನಿ : ಹೆಚ್.ಡಿ. ಕುಮಾರಸ್ವಾಮಿ (೪೦ ಸೆಕೆಂಡ್ಸ್)**

ಹಾಸನ ಜಿಲ್ಲೆಯಲ್ಲಿ ಕಾಡಾನೆ ಹಾವಳಿ ನಿಯಂತ್ರಣ ಮಾಡುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ್ದಾರೆ.

<><><><>

ಕೆಪಿಸಿಸಿ ಅಧ್ಯಕ್ಷ ಹುದ್ದೆ ನಿಭಾಯಿಸಲು ಸಿದ್ದ ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ತಿಳಿಸಿದ್ದಾರೆ. ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡಿದರೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವುದಾಗಿ ಹೇಳಿದ್ದಾರೆ. ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ವಿಚಾರವಾಗಿ ಹೈಕಮಾಂಡ್‌ಗೆ ತಮ್ಮ ಅಭಿಪ್ರಾಯ ತಿಳಿಸಿದ್ದು, 'ಒಬ್ಬ ವ್ಯಕ್ತಿಗೆ ಒಂದು ಹುದ್ದೆ' ಸಿದ್ಧಾಂತಕ್ಕೆ ಬದ್ಧವಾಗಿರುವುದಾಗಿ ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಎಲ್ಲ ಸಮುದಾಯಗಳು ಬೆಂಬಲ ನೀಡಿದ್ದು, ಶೋಷಿತ ವರ್ಗಗಳ ಸಮಾವೇಶ ಏರ್ಪಡಿಸುವ ಮೂಲಕ ಅವರಿಗೆ ಅಭಿನಂದಿಸಲಾಗುವುದು ಎಂದು ಹೇಳಿದ್ದಾರೆ.

<><><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಂಗನ ಕಾಯಿಲೆ ಪೀಡಿತರ ಸಂಖ್ಯೆ ಏರಿಕೆಯಾಗಿದ್ದು ಜನವರಿಯಿಂದ ಇಲ್ಲಿವರೆಗೆ ಒಟ್ಟು ೧೮ ಜನರಲ್ಲಿ ಈ ಸೋಂಕು ಕಾಣಿಸಿಕೊಂಡಿದೆ. ಕಳೆದ ವಾರ ೧೪ ಜನರಿಗೆ ಕೆ.ಎಫ್.ಡಿ ಪತ್ತೆಯಾಗಿದ್ದು ಎರಡು ದಿನಗಳ ಹಿಂದೆ ಕೊಪ್ಪ ಹಾಗು ಎನ್.ಆರ್ ಪುರ ತಾಲೂಕಿನ ನಾಲ್ವರಲ್ಲಿ ಮತ್ತೆ ಕೆ.ಎಫ್.ಡಿ ಸೋಂಕು ಕಾಣಿಸಿಕೊಂಡಿದೆ. ಈ ಬಗ್ಗೆ ಆಕಾಶವಾಣಿಗೆ ಮಾಹಿತಿ ನೀಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ: ಆಶ್ವಥ್ ಬಾಬು ೧೮ ಸೋಂಕಿತರಲ್ಲಿ ೧೧ ಜನರು ಚಿಕಿತ್ಸೆ ಪಡೆದು ಗುಣಮುಖರಾಗಿ ಮನೆಗೆ ಹಿಂತಿರುಗಿದ್ದಾರೆ. ೭ ಜನರಿಗೆ ಚಿಕಿತ್ಸೆ ಮುಂದುವರೆದಿದೆ. ಜಿಲ್ಲೆಯ ಕೊಪ್ಪ, ಎನ್.ಆರ್ ಪುರ ತಾಲೂಕು ಆಸ್ಪತ್ರೆಗಳಲ್ಲಿ ಕೆ.ಎಫ್.ಡಿ ವಿಶೇಷ ವಾರ್ಡ್ ತೆರೆದು ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ. ಕೊಪ್ಪ. ಎನ್.ಆರ್.ಪುರ. ಶೃಂಗೇರಿ ತಾಲೂಕಿನ ಅರಣ್ಯದಂಚಿನ ಗ್ರಾಮಗಳ ಮನೆಗಳಿಗೆ ತೆರಳಿ ಕಾಯಿಲೆ ಹರಡುವ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

<><><>

ಮಂಡ್ಯ ಜಿಲ್ಲೆಯಲ್ಲಿರುವ ಖಾಸಗಿ ಸಕ್ಕರೆ ಕಾರ್ಖಾನೆಗಳು ೧೪ ದಿನದೊಳಗಾಗಿ ರೈತರಿಂದ ಖರೀದಿ ಮಾಡುವ ಕಬ್ಬಿನ ಹಣ ಪಾವತಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಮಂಡ್ಯ ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಕ್ಕರೆ ಕಾರ್ಖಾನೆಯ ಮಾಲೀಕರು ಹಾಗೂ ರೈತರೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಮೈ ಶುಗರ್ ಸಕ್ಕರೆ ಕಾರ್ಖಾನೆಯು ಸರ್ಕಾರಿ ಸಂಸ್ಥೆಯಾಗಿದ್ದು, ರೈತರಿಂದ ಖರೀದಿ ಮಾಡಿರುವ ಕಬ್ಬಿಗೆ ಹಣ ಪಾವತಿಸಿದೆ. ಖಾಸಗಿ ಸಕ್ಕರೆ ಕಾರ್ಖಾನೆಗಳು ಹಣ ಪಾವತಿಸುವಂತೆ ಸೂಚಿಸಿದ್ದಾರೆ. ಚಾಮುಂಡೇಶ್ವರಿ ಸಕ್ಕರೆ ಕಾರ್ಖಾನೆ, ಕೊಪ್ಪ ಎನ್.ಎಸ್.ಎಲ್ ಹಾಗೂ ಕೆ.ಆರ್.ಪೇಟೆ ಕೋರಮಂಡಲ್ ಸಕ್ಕರೆ ಕಾರ್ಖಾನೆಗಳಲ್ಲಿ ಪಾವತಿಗೆ ಬಾಕಿ ಇರುವ ರೈತರ ಮಾಹಿತಿ ಪಡೆದುಕೊಂಡ ಜಿಲ್ಲಾಧಿಕಾರಿ ಚಾಮುಂಡೇಶ್ವರಿ ಸಕ್ಕರೆ ಕಾರ್ಖಾನೆಯವರು ಮಾರ್ಚ್ ೧೦ ರೊಳಗೆ ಹಣ ಪಾವತಿ ಮಾಡಬೇಕು. ಕೋರಮಂಡಲ್ ಹಾಗೂ ಎನ್.ಎಸ್.ಎಲ್ ಕಾರ್ಖಾನೆ ಅವರು ಇದೇ ೨೮ ರೊಳಗಾಗಿ ಹಣ ಪಾವತಿಸುವಂತೆ ನಿರ್ದೇಶನ ನೀಡಿದ್ದಾರೆ. ಇದೇ ವೇಳೆ ಸಕ್ಕರೆ ಕಾರ್ಖಾನೆಗಳು ರೈತರು ಉಪಯೋಗಿಸಬೇಕಿರುವ ತಳಿ, ಗೊಬ್ಬರ, ಬೆಳೆಯಲ್ಲಿ ನೀಡಬೇಕಿರುವ ಅಂತರ ಸೇರಿದಂತೆ ಕೃಷಿ ಪದ್ಧತಿಯ ಬಗ್ಗೆ ಜಾಗೃತಿ ಮೂಡಿಸುವಂತೆ ತಿಳಿಸಿದರು.

<><><>

ಗ್ರಾಮ ಆಡಳಿತ ಅಧಿಕಾರಿಗಳ ಮುಷ್ಕರದಿಂದ ಜಾತಿ, ಆದಾಯ ಪ್ರಮಾಣ ಪತ್ರ ಪಡೆಯಲು ವಿಳಂಬವಾಗುತ್ತಿರುವ ಹಿನ್ನೆಲೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪರೀಕ್ಷೆ ಹಾಗೂ ನೇಮಕಾತಿ ಉದ್ದೇಶಗಳಿಗಾಗಿ ತ್ವರಿತವಾಗಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಅವಶ್ಯಕತೆ ಇರುವ ಜಿಲ್ಲೆಯ ವಿದ್ಯಾರ್ಥಿಗಳು, ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ ೬೩೬೧೯೬೮೦೩೧ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ ಬಸವರಾಜ ತಿಳಿಸಿದ್ದಾರೆ. ಕೋಲಾರದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಮುಷ್ಕರದಿಂದ ಜಾತಿ ಹಾಗೂ

ಆದಾಯ ಪ್ರಮಾಣ ಪತ್ರ ಪಡೆಯಲು ವಿಳಂಬವಾಗುತ್ತಿದ್ದು, ವಿದ್ಯಾರ್ಥಿಗಳು ಹಾಗೂ ಅಭ್ಯರ್ಥಿಗಳ ಅನುಕೂಲಕ್ಕಾಗಿ ಜಿಲ್ಲಾಧಿಕಾರಿ ಕಛೇರಿಯಲ್ಲಿ ಸಹಾಯವಾಣಿ ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ.

<><><><>

ನವ ಮಂಗಳೂರು ಬಂದರು, ಕಾಫಿ ರಫ್ತಿಗೆ ಸಕಲ ಸೌಲಭ್ಯಗಳನ್ನು ಹೊಂದಿದ್ದು, ಪ್ರಸಕ್ತ ಸಾಲಿನಲ್ಲಿ ವಿದೇಶಗಳಿಗೆ ಕಾಫಿಯ ರಫ್ತು ವಹಿವಾಟು ನಡೆಸುವ ಗುರಿ ಹೊಂದಲಾಗಿದೆ ಎಂದು ನವಮಂಗಳೂರು ಬಂದರು ಟ್ರಸ್ಟ್ ಅಧ್ಯಕ್ಷ ಡಾ. ವೆಂಕಟರಮಣ ಅಕ್ಕಿರಾಜು ಹೇಳಿದ್ದಾರೆ. ನವಮಂಗಳೂರು ಬಂದರು ಟ್ರಸ್ಟ್ ವತಿಯಿಂದ ಮಡಿಕೇರಿಯಲ್ಲಿ ಆಯೋಜಿಸಲಾಗಿದ್ದ ಕೊಡಗು, ಚಿಕ್ಕಮಗಳೂರು, ಹಾಸನ ಜಿಲ್ಲೆಗಳ ಚೇಂಬರ್ ಆಫ್ ಕಾಮರ್ಸ್ ಪದಾಧಿಕಾರಿಗಳು, ಕಾಫಿ ಉದ್ಯಮಿಗಳು, ರಫ್ತುದಾರರ ವಹಿವಾಟುದಾರರ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ೨೦೨೩-೨೪ ನೇ ಸಾಲಿನಲ್ಲಿ ನವಮಂಗಳೂರು ಬಂದರು ಮೂಲಕ ೪೫.೦೬ ಲಕ್ಷ ಮೆಟ್ರಿಕ್ ಟನ್ ಗಳಷ್ಟು ಉತ್ಪನ್ನಗಳ ಸಾಗಾಣಿಕೆಯಾಗಿದೆ. ಈ ಪೈಕಿ ಕಾಫಿಯೇ ಅತ್ಯಧಿಕ ಪ್ರಮಾಣದಲ್ಲಿ ಸಾಗಾಣಿಕೆಯಾಗಿರುವುದು ಗಮನಾರ್ಹ ಎಂದು ತಿಳಿಸಿದರು.

<><><><>

ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ವಿಶೇಷ ಕಾಳಜಿಯ ಪ್ರಯತ್ನದ ಫಲವಾಗಿ ರಾಜ್ಯದ ೪೮೬ ಅಮೃತ ರೈತ ಉತ್ಪಾದಕ ಸಂಸ್ಥೆಗಳಿಗೆ ಒಟ್ಟು ೨೦ ಕೋಟಿ ರೂಪಾಯಿ ಅನುದಾನ ಒದಗಿಸಲಾಗಿದೆ. ರೈತ ಉತ್ಪಾದನಾ ಸಂಸ್ಥೆಗಳನ್ನು ಇನ್ನಷ್ಟು ಬಲಪಡಿಸುವ ನಿಟ್ಟಿನಲ್ಲಿ ನಿರಂತರವಾಗಿ ಶ್ರಮಿಸುತ್ತಿರುವ ಕೃಷಿ ಸಚಿವರು, ಮೂರು ವರ್ಷಗಳಿಂದ ಬಿಡುಗಡೆಯಾಗದಿದ್ದ ಅನುದಾನವನ್ನು ಬಿಡುಗಡೆ ಮಾಡಿಸುವಲ್ಲಿ ಯಶಸ್ವಿಯಾಗಿದ್ದಾರೆ. ಈ ಹಿನ್ನೆಲೆಯಲ್ಲಿ ರೈತ ಉತ್ಪಾದನಾ ಸಂಸ್ಥೆಗಳು ಕೃಷಿ ಸಚಿವರಿಗೆ ಕೃತಜ್ಞತೆ ಸಲ್ಲಿಸಿವೆ.

<><><><>

ಮಂಡ್ಯ ಜಿಲ್ಲೆಯ ಪೂರ್ವದ ಇತಿಹಾಸವನ್ನು ಶಾಸನಗಳು ತಿಳಿಸುತ್ತಿದ್ದು, ಇದನ್ನು ಸಂರಕ್ಷಣೆ ಮಾಡುವುದು ತಮ್ಮೆಲ್ಲರ ಜವಾಬ್ದಾರಿ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚೆಲುವರಾಯಸ್ವಾಮಿ ತಿಳಿಸಿದ್ದಾರೆ. ಕೆರೆ ಕಟ್ಟೆಗಳ ಅಳಿವು ಉಳಿವು ಕುರಿತು ಅಧಿಕಾರಿಗಳೊಂದಿಗೆ ಚಿಂತನಾವಲೋಕನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಆತಗೂರು "ಕಾಳಿ" ಹೆಸರಿನ ನಾಯಿ ಶಾಸನ ತನ್ನದೇ ಆದ ವಿಶೇಷ ಮಹತ್ವ ಹೊಂದಿದೆ. ಇದನ್ನು ಸಂರಕ್ಷಿಸಲು ಜಿಲ್ಲಾಡಳಿತ ನಡೆಸುತ್ತಿರುವ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದು ಹೇಳಿದರು. ಇದೆ ವೇಳೆ ಸರ್ಕಾರ ಹಾಗೂ ಜಿಲ್ಲಾಡಳಿತ ಕೆರೆ ಸಂರಕ್ಷಣೆಗೆ ಹಲವಾರು ಯೋಜನೆ ಹಾಗೂ ಕ್ರಮಕೈಗೊಳ್ಳುತ್ತಿದೆ ಎಂದು ಅವರು ಸ್ಪಷ್ಟಪಡಿಸಿದರು.

<><><><>

ಚಿತ್ರದುರ್ಗದಲ್ಲಿ ಕೇಂದ್ರ ಸರಕಾರದ ಅನುದಾನದಲ್ಲಿ ೧೬೪ ಕೋಟಿ ರೂಪಾಯಿ ವೆಚ್ಚದಲ್ಲಿ ಮೂರು ರೈಲ್ವೆ ಮೇಲುಸೇತುವೆ ನಿರ್ಮಿಸಲಾಗುವುದು ಎಂದು ಚಿತ್ರದುರ್ಗ ಲೋಕಸಭಾ ಸದಸ್ಯ ಗೊವಿಂದ ಕಾರಜೋಳ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚಿತ್ರದುರ್ಗ ನಗರದಿಂದ ದಾವಣಗೆರೆಗೆ ಹೋಗುವ ರಸ್ತೆಯ ಗೇಟ್ ನಂ. ೨೨ಕ್ಕೆ ೬೮ ಕೋಟಿ ರೂಪಾಯಿ, ಹೊಳಲ್ಕೆರೆ ತಾಲೂಕಿನ ಚಿಕ್ಕಜಾಜೂರು ರೈಲ್ವೆ ಗೇಟ್ ನಂ. ೧ಕ್ಕೆ ೫೨ ಕೋಟಿ ರೂಪಾಯಿ, ಚಿತ್ರದುರ್ಗ ತಾಲೂಕಿನ ಹಳಿಯೂರು ಗ್ರಾಮದ ಬಳಿ ಇರುವ ಗೇಟ್ ನಂ. ೧೫ಕ್ಕೆ ೩೩ ಕೋಟಿ ರೂಪಾಯಿ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಹೂಲಗೇರಿ ಗ್ರಾಮದಲ್ಲಿ ೧೩ ಕುಷ್ಟಗಿ ತಾಲ್ಲೂಕಾ ಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಕರ್ನಾಟಕ ರಾಜ್ಯ ಬಯಲಾಟ ಆಕಾಡೆಮಿ ಅಧ್ಯಕ್ಷ ಡಾ.ಕೆ.ಆರ್ ದುರ್ಗಾದಾಸ ಅವರು ದೀಪ

ಬೆಳಗಿಸುವ ಮೂಲಕ ಚಾಲನೆ ನೀಡಿದರು. ಇಂದು ದಿವಂಗತ ವಾಸಪ್ಪ ಮಾಸ್ತರ ಮಹಾವೇದಿಕೆಯಲ್ಲಿ ಕಾರ್ಯಕ್ರಮ ನಡೆಯಿತು.

<><><><>

ಸಂಕ್ಷಿಪ್ತ ಸುದ್ದಿಗಳು

1. ವಿಜಯಪುರ ಜಿಲ್ಲೆಯಲ್ಲಿ ಯಾವುದೇ ಸರ್ಕಾರಿ ಅಧಿಕಾರಿ-ಸಿಬ್ಬಂದಿಯ ಸರ್ಕಾರಿ ಕೆಲಸಕ್ಕೆ ಅಡ್ಡಿಪಡಿಸುವುದು, ಹಲ್ಲೆ ಮಾಡುವುದನ್ನು ಗಂಭೀರವಾಗಿ ಪರಿಗಣಿಸಿ ಅಂತಹವರ ಮೇಲೆ ಕಾನೂನಿನ ರೀತಿ ಕ್ರಮಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ಭೂಬಾಲನ್ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಎಚ್ಚರಿಕೆ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>